**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ, ಶ್ರೀ ಸುನೀಲಗೌಡ ಬಿ. ಪಾಟೀಲ್. ಇವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:96ಕ್ಕೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಉತ್ತರ.**

ಪ್ರಶ್ನೆ:

**ವಿಜಯಪುರ ನಗರ ಹಾಗೂ ಜಿಲ್ಲೆ ಅಂತರರಾಷ್ಟ್ರೀಯ ಪ್ರವಾಸಿ ತಾಣಗಳನ್ನು ಹೊಂದಿರುವ ಪ್ರದೇಶವಾಗಿದ್ದು, ಈ ಜಿಲ್ಲೆಯ ಸಾವಿರಾರು ಉದ್ಯೋಗಿಗಳು ಬೆಂಗಳೂರಿನ ಐಟಿ/ಬಿಟಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ದಿನನಿತ್ಯವು ಸಾವಿರಾರು ಜನ ಬೆಂಗಳೂರಿಗೆ ಸಂಚರಿಸಲು ಹೈಟೆಕ್ ಬಸ್‌ಗಳ ಸೌಲಭ್ಯವಿಲ್ಲದ ಕಾರಣ ಅನಿವಾರ್ಯವಾಗಿ ಖಾಸಗಿ ಬಸ್‌ಗಳ ಮೇಲೆ ಅವಲಂಬಿತರಾಗಿದ್ದು, ಖಾಸಗಿಯವರು ವಾರಾಂತ್ಯದಲ್ಲಿ ಹಾಗೂ ರಜಾ ದಿನಗಳಲ್ಲಿ ಪ್ರಯಾಣಿಕರಿಂದ ಹೆಚ್ಚಿನ ದರಗಳನ್ನು ವಸೂಲಿ ಮಾಡುತ್ತಿದ್ದಾರೆ ಇದರಿಂದಾಗಿ ಪ್ರಯಾಣಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಕಾರಣ ಬೆಂಗಳೂರಿನಿಂದ ಪ್ರಮುಖ ಪ್ರವಾಸಿ ಹಾಗೂ ಜಿಲ್ಲಾ ಕೇಂದ್ರ ವಿಜಯಪುರವನ್ನು ಸಂಪರ್ಕಿಸಲು ರಸ್ತೆ ಸಾರಿಗೆ ನಿಗಮದಿಂದ 2AC ಮಲ್ಟಿ ಆಕ್ಸಲ್ ವೋಲ್ವೋ ಸ್ಲೀಪರ್ ಬಸ್‌ಗಳ ಸೇವೆಯನ್ನು ಆರಂಭಿಸಲು ಆಗ್ರಹಿಸುತ್ತಾ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯಬಯಸುತ್ತೇನೆ.**

**ಉತ್ತರ:**

ಪ್ರಸ್ತುತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ವಿಜಯಪುರ-ಭೆಂಗಳೂರು ಮಾರ್ಗದಲ್ಲಿ ವಿಜಯಪುರ ವಿಭಾಗದ ಘಟಕ-2 ರಿಂದ ಅನುಸೂಚಿ ಸಂಖ್ಯೆ: 139/140 ರಲ್ಲಿ ಒಂದು ನಾನ್ ಎಸಿ ಸ್ಲೀಪರ್ ಮತ್ತು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೋಲಾರ ವಿಭಾಗದಿಂದ ವಿಜಯಪುರಕ್ಕೆ ಒಂದು ರಾಜಹಂಸ ಸಾರಿಗೆ ಕಾರ್ಯಾಚರಣೆಯಲ್ಲಿದ್ದು, ಇವುಗಳೊಂದಿಗೆ 12 ವೇಗದೂತ ಅನುಸೂಚಿಗಳು ಕಾರ್ಯಾಚರಣೆಯಲ್ಲಿರುತ್ತವೆ.

ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.

ಪ್ರಸಕ್ತ ಸಾಲಿನಲ್ಲಿ ನಿಗಮದಲ್ಲಿ ಹೊಸ ವೋಲ್ವೋ ಮಲ್ಟಿ ಆಕ್ಸಲ್ ಸ್ಲೀಪರ್ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿದ್ದು, ಖರೀದಿ ಪ್ರಕ್ರಿಯೆ ಮುಗಿದ ನಂತರ ಅವಶ್ಯಕತೆಗನುಗುಣವಾಗಿ ವಿಜಯಪುರ-ಬೆಂಗಳೂರು ಮಾರ್ಗದಲ್ಲಿ ಕಾರ್ಯಾಚರಣೆಗೆ ಒದಗಿಸಲು ಪರಿಶೀಲಿಸಲಾಗುವುದು.

ಸಂಖ್ಯೆ: ಟಿಡಿ 228 ಟಿಸಿಕ್ಯೂ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು